ದಿನಾಂಕಃ**24-02-2026** ರಂದು ಸಾಕ್ಷಿಯನ್ನು ಪುನಃ ಕರೆಸಿ ಪ್ರಮಾಣವಚನ ಮಾಡಿಸಲಾಯಿತು.

ಪಾಟೀ ಸವಾಲುಃ **2** ನೇ ಎದುರುದಾರರ ಪರ ಶ್ರೀ ಸಿ ಒ ವೈ ವಕೀಲರ ಪರವಾಗಿ ಶ್ರೀ ಎಸ್ ಪಿ ವಕೀಲರಿಂದಃ

1. ನಾವು ಆ ದಿನ ಪ್ಯಾಸೆಂಜರ್ ಆಟೋದಲ್ಲಿ ನಾನು, ನನ್ನ ಗಂಡ ಮತ್ತು ನನ್ನ ಮಗು ಪ್ರಯಾಣಿಸುತ್ತಿದ್ದೆವು. ನಾವು ಆ ದಿನ ಶೆಟ್ಟಿಕೊಪ್ಪದಿಂದ ಹೊಸ್ಕೆರೆಗೆ ಹೋಗುತ್ತಿದ್ದೆವು. ಅಪಘಾತಕ್ಕೆ ಸಂಬಂಧಪಟ್ಟಂತೆ ನಾನು ಆಸ್ಪತ್ರೆಯಲ್ಲಿ ಇದ್ದಾಗ ದಿನಾಂಕಃ15.05.2023 ರಂದು ಪೊಲೀಸರು ನನ್ನ ಹೇಳಿಕೆಯನ್ನು ಪಡೆದುಕೊಂಡಿರುತ್ತಾರೆ. ನಾನು ಆಸ್ಪತ್ರೆಯಲ್ಲಿ ಅಪಘಾತದಿಂದಾಗಿ ಚಿಕಿತ್ಸೆ ಪಡೆದುಕೊಂಡಿರುತ್ತೇನೆ ಎಂಬುದರ ಬಗ್ಗೆ ದಾಖಲೆಯನ್ನು ಹಾಜರುಪಡಿಸಿರುತ್ತೇನೆ. ನಾನು ಆ ರೀತಿ ಯಾವುದೇ ದಾಖಲೆಯನ್ನು ಹಾಜರುಪಡಿಸಿರುವುದಿಲ್ಲ ಎಂದರೆ ಸರಿಯಲ್ಲ.

2. ಮಗುವನ್ನು ಮೊದಲು ಸರ್ಕಾರಿ ಆಸ್ಪತ್ರೆ , ನ ರಾ ಪುರದಲ್ಲಿ ಚಿಕಿತ್ಸೆ ಪಡೆದು ಅಲ್ಲಿಂದ ಹೆಚ್ಚಿನ ಚಿಕಿತ್ಸೆಗಾಗಿ ಸರ್ಜಿ ಆಸ್ಪತ್ರೆ, ಶಿವಮೊಗ್ಗದಲ್ಲಿ ಚಿಕಿತ್ಸೆ ಪಡೆದುಕೊಂಡಿರುತ್ತದೆ. ನನ್ನ ಮಗುವನ್ನು ಶಸ್ತ್ರ ಚಿಕಿತ್ಸೆಗೆ ಒಳಪಡಿಸಿರುತ್ತಾರೆ. ದಿನಾಂಕಃ15.05.2023 ರಂದು ಅಪಘಾತ ಆಗಿದ್ದು , ದಿನಾಂಕಃ17.05.2023 ರಂದು ದೂರು ಕೊಟ್ಟಿರುತ್ತೇವೆ ಎಂದರೆ ಸರಿ .

3. ಅಪಘಾತ ಆಗುವ ಕಾಲಕ್ಕೆ ಮಗುವಿಗೆ 5 ತಿಂಗಳು ವಯಸ್ಸಿತ್ತು. ಅಪಘಾತದಿಂದ ಮಗುವಿಗೆ ಸಾಮಾನ್ಯ ಸ್ವರೂಪದ ಗಾಯಗಳು ಉಂಟಾಗಿರುತ್ತವೆ ಎಂದರೆ ಸರಿಯಲ್ಲ. ಮಗುವಿನ ಚಿಕಿತ್ಸೆಗಾಗಿ ರೂ.5 ಲಕ್ಷ ಹಣ ಖರ್ಚು ಮಾಡಿರುತ್ತೇನೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಮಗುವಿನ ಮುಂದುವರಿದ ಚಿಕಿತ್ಸೆಗೆ ರೂ.2 ಲಕ್ಷದ ಅವಶ್ಯಕತೆ ಇರುತ್ತದೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಅಪಘಾತದಿಂದಾದ ಗಾಯಗಳಿಂದ ಮಗು ಸಂಪೂರ್ಣವಾಗಿ ಗುಣಮುಖವಾಗಿದ್ದಾನೆ ಎಂದರೆ ಸರಿಯಲ್ಲ. ಆ ದಿನ 1 ನೇ ಎದುರುದಾರರು ಹೆಚ್ಚಿನ ಪ್ರಯಾಣಿಕರನ್ನು ಆಟೋದಲ್ಲಿ ಕೂರಿಸಿಕೊಂಡು ಹೋಗಿ ನಿಯಂತ್ರಣ ತಪ್ಪಿ ಅವರ ತಪ್ಪಿನಿಂದ ಅಪಘಾತ ಪಡಿಸಿರುತ್ತಾರೆ ಎಂದರೆ ಸರಿಯಲ್ಲ. ನಾನು ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರದಲ್ಲಿ ಸುಳ್ಳು ವಿಚಾರಗಳನ್ನು ಹೇಳಿರುತ್ತೇನೆ ಎಂದರೆ ಸರಿಯಲ್ಲ. ನಾನು ನನ್ನ ಅರ್ಜಿಯಲ್ಲಿ ಹೆಚ್ಚಿನ ಪರಿಹಾರ ಕೋರಿರುತ್ತೇನೆ ಎಂದರೆ ಸರಿಯಲ್ಲ. ನಾನು ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲುಃ 1 ನೇ ಎದುರುದಾರರ ಪರ ಶ್ರೀ ಕೆ ಎಸ್ ಎಸ್ ವಕೀಲರಿಂದಃ

ಆ ದಿನ ಆಟೋದಲ್ಲಿ ನಾನು, ನನ್ನ ಗಂಡ ಮತ್ತು ನನ್ನ ಮಗು ಮಾತ್ರ ಪ್ರಯಾಣಿಸುತ್ತಿದ್ದೆವು ಎಂದರೆ ಸರಿ. 1 ನೇ ಎದುರುದಾರರು ಆಟೋ ಚಲಾಯಿಸುವ ಕಾಲಕ್ಕೆ ಸಮವಸ್ತ್ರ, ಚಾಲನಾ ಪರವಾನಿಗೆ ಪತ್ರ ಹಾಗೂ ಸದರಿ ಆಟೋಕ್ಕೆ ವಿಮೆಯನ್ನು ಹೊಂದಿದ್ದರು ಎಂದರೆ ಸರಿ. ಆ ದಿನ ಆಟೋ ಚಾಲಕನು ಅತೀ ವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಬಂದಿರುವುದಿಲ್ಲ ಎಂದರೆ ಸರಿಯಲ್ಲ. ಅಪಘಾತ ಆಟೋ ಚಾಲಕನ ತಪ್ಪಿನಿಂದ ಆಗಿರುವುದಿಲ್ಲ ಎಂದರೆ ಸರಿಯಲ್ಲ. ನಾನು ಪರಿಹಾರ ಪಡೆಯುವ ಸಲುವಾಗಿ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ ಃ ಇಲ್ಲ ಃ

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಗಿದೆ.)

ಓ ಹೇ ಕೇ ಸ ಇ ಎ ಒ

ಸಹಿ/-
ಹಿರಿಯ ಸಿವಿಲ್ ನ್ಯಾಯಾಧೀಶರುಃ ನ.ರಾ.ಪುರ.

ಸಾಕ್ಷಿದಾರರ ಸಹಿ ಃ